ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ : 24ನೇ ಜುಲೈ, 2019

17. ವೃದ್ಧ ಪಾಲಕರನ್ನು ರಕ್ಷಿಸುವ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) :-

572 (620) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ವೃದ್ಧ ಪಾಲಕರನ್ನು ಇಂದಿನ ಯುವ ಜನಾಂಗ ಕಡೆಗಣಿಸುತ್ತಿದ್ದು,ಅಸಹಾಯಕ ವೃದ್ಧರ ರಕ್ಷಣೆ ಮತ್ತು ಸುರಕ್ಷತೆಯ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ವೃದ್ಧಾಶ್ರಮ ಮತ್ತು ಅನಾಥಾಶ್ರಮಗಳನ್ನು ಸಂಯೋಜಿಸಿ ಮನೆ ವಾತಾವರಣ ಇರುವಂತಹ ಹೊಸ ತರಹದ ಪಾಲನಾ ಗೃಹಗಳನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ವೃದ್ಧರನ್ನು ಕಡೆಗಣಿಸಿ ಅವರ ಅಂತಿಮ ದಿನಗಳಲ್ಲಿ ಬೀದಿಗೆ ದೂಡುವ ಕುಟುಂಬಸ್ಥರ ಮೇಲೆ ಕ್ರಮ ಕೈಗೊಳ್ಳುವ ಕಾನೂನು ರೂಪಿಸುವ ಬಗ್ಗೆ ಸರ್ಕಾರದ ನಿಲುವೇನು ?